# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 1179 (1326)

ಸದಸ್ಯರ ಹೆಸರು ಶ್ರೀ ಗೋವಿಂದ ರಾಜು (ವಿಧಾನಸಭಾ ಕ್ಷೇತ್ರ)

ಉತ್ತರಿಸಬೇಕಾದ ದಿನಾಂಕ 16.03.2026

ಉತ್ತರಿಸುವವರು ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಅರಣ್ಯ ಪ್ರದೇಶಗಳಲ್ಲಿ ಸಾರ್ವಜನಿಕರ ಸಫಾರಿಗೆ ಸರ್ಕಾರ ನಿರ್ಬಂಧ ವಿಧಿಸಲಾಗಿದೆಯೇ, ಇದರ ಆದೇಶದ ಪ್ರತಿಗಳನ್ನು ಒದಗಿಸುವುದು ಹಾಗೂ ನಿರ್ಬಂಧ ವಿಧಿಸಲು ಇರುವ ಕಾರಣಗಳೇನು: | • ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಯಲ್ಲಿ ಮಾನವ-ವನ್ಯಜೀವಿ ಸಂಘರ್ಷದಿಂದ ಮೂರು (03) ಮಾನವ ಹತ್ಯೆ ಪ್ರಕರಣಗಳು ಹಾಗೂ ಒಂದು (01) ಮಾನವ ಶಾಶ್ವತ ಅಂಗವಿಕಲತೆ ಪ್ರಕರಣ ಉಂಟಾಗಿರುತ್ತದೆ.<br>• ಕಾಡಿನಲ್ಲಿ ನಡೆಯುವ ಸಫಾರಿಯಿಂದಾಗಿ ವನ್ಯಪ್ರಾಣಿಗಳು ಕಾಡಿನಿಂದ ಹೊರ ಬರುತ್ತಿವೆ ಎಂಬ ರೈತರ ಅಭಿಪ್ರಾಯದ ಮೇರೆಗೆ, ಮಾನ್ಯ ಸಚಿವರು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ರವರು ದಿನಾಂಕ: 07-11-2025 ರ ಟಿಪ್ಪಣಿರಲ್ಲಿ ಸೂಚಿಸಿದನ್ವಯ ಬಂಡೀಪುರ ಹಾಗೂ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶಗಳಲ್ಲಿ ದಿನಾಂಕ: 07-11-2025 ರಿಂದ ಸಫಾರಿ ಚಟುವಟಿಕೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದ್ದು, ತದನಂತರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ರವರ ಕಛೇರಿಯ ದಿನಾಂಕ: 21-02-2026ರ ಅಧಿಕೃತ ಜ್ಞಾಪನಾ ಪತ್ರದಲ್ಲಿ ಸದರಿ ಪರಿಸರ ಪ್ರವಾಸೋದ್ಯಮ ಚಟುವಟಿಕೆಯನ್ನು ಹಂತ-ಹಂತವಾಗಿ ಪುನರಾರಂಭಿಸಲು ಷರತ್ತಿಗೊಳಪಟ್ಟು ಆದೇಶಿಸಲಾಗಿರುತ್ತದೆ.<br>• ರಾಜ್ಯದ ಒಟ್ಟು 11 ಸಂರಕ್ಷಿತ ಪ್ರದೇಶಗಳಲ್ಲಿ ಪ್ರಸ್ತುತ ಸಫಾರಿ ಚಟುವಟಿಕೆಯು ಚಾಲ್ತಿಯಲ್ಲಿರುತ್ತದೆ. |
| ಆ) | ಈ ರೀತಿಯ ಕ್ರಮದಿಂದ ಮುಂದಿನ ದಿನದಲ್ಲಿ ಇಡೀ ರಾಜ್ಯದ ಪ್ರವಾಸೋದ್ಯಮದ ಮೇಲೆ ತೀವ್ರ ಹೊಡೆತ ಬೀಳುವ ಸಾಧ್ಯತೆ ಇಲ್ಲವೇ; ಇದರ ಬಗ್ಗೆ ಸರ್ಕಾರ ಗಮನಹರಿಸಿದೆಯೇ: | |
| ಇ) | ರಾಜ್ಯದಲ್ಲಿ ಎಷ್ಟು ಅರಣ್ಯ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಸಫಾರಿಗೆ ಅವಕಾಶ ನೀಡಲಾಗಿದೆ; ಸರ್ಕಾರದ ಈ ರೀತಿಯ ಕ್ರಮದಿಂದ ವಿದೇಶದಿಂದ ಬರುವ ಪ್ರವಾಸಿಗರು ಕರ್ನಾಟಕಕ್ಕೆ ಬಾರದೇ ಬೇರೆ ರಾಜ್ಯಕ್ಕೆ ಹೋದರೆ ರಾಜ್ಯಕ್ಕೆ ಬರುವ ಆದಾಯಕ್ಕೆ ಹೊಡೆತ ಬೀಳುವುದಿಲ್ಲವೇ; | |
| ಈ) | ಸಫಾರಿಗೂ ಹುಲಿಗಳ ದಾಳಿಗೂ ಸಂಬಂಧವಿಲ್ಲದಿದ್ದರೂ, ಸಫಾರಿಯನ್ನು ನಿರ್ಬಂಧಿಸಿರುವ ಅರಣ್ಯ ಇಲಾಖೆಯ ಮೇಲಾಧಿಕಾರಿಗಳಿಗೆ ಬಂಡೀಪುರ-ನಾಗರಹೊಳೆ ಪ್ರದೇಶದ ಸ್ಪಷ್ಟ ಚಿತ್ರಣವಿಲ್ಲ ಎಂಬುದಾಗಿ | ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಯಲ್ಲಿ ಮಾನವ ವನ್ಯಜೀವಿ ಸಂಘರ್ಷದಿಂದ ಮೂರು (03) ಮಾನವ ಹತ್ಯೆ ಪ್ರಕರಣಗಳು ಹಾಗೂ ಒಂದು (01) ಮಾನವ ಶಾಶ್ವತ ಅಂಗವಿಕಲತೆ ಪ್ರಕರಣ ಉಂಟಾಗಿದ್ದರಿಂದ ಸರ್ಕಾರದ ಸೂಚನೆಯ ಮೇರೆಗೆ ದಿ: 07-11-2025 ರಿಂದ ಸಫಾರಿಯನ್ನು ತಾತ್ಕಾಲಿಕವಾಗಿ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | ಹೇಳಲಾಗುತ್ತಿದೆ. ಇದರ ಬಗ್ಗೆ ಅಧಿಕಾರಿಗಳು ಪರಿಶೀಲಿಸಿದ್ದಾರೆಯೇ: | ಸ್ಥಗಿತಗೊಳಿಸಿ, ಸದರಿ ಸಫಾರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅಧಿಕಾರಿ/ ಸಿಬ್ಬಂದಿಗಳನ್ನು ಹಾಗೂ ವಾಹನಗಳನ್ನು ಮಾನವ-ವನ್ಯಪ್ರಾಣಿ ಸಂಘರ್ಷವನ್ನು ನಿಯಂತ್ರಿಸಲು ನಿಯೋಜಿಸಲಾಗಿರುತ್ತದೆ. |
| ಉ) | ಈ ಭಾಗದ ರೆಸಾರ್ಟ್, ಹೋಮ್ ಸ್ಟೇ ಮಾಲೀಕರು ಈಗಾಗಲೇ ನಷ್ಟ ಅನುಭವಿಸಿ, ಬೀದಿಗೆ ಬೀಳುವ ಪರಿಸ್ಥಿತಿಯಲ್ಲಿದ್ದಾರೆ. ಸಫಾರಿಯ ನಿರ್ಬಂಧ ಇಡೀ ರಾಜ್ಯದ ಪ್ರವಾಸೋದ್ಯಮದ ಮೇಲೆ ಹೊಡೆತ ಬೀಳುತ್ತದೆ: ಇದರ ಬಗ್ಗೆ ಸರ್ಕಾರ ಮರುಪರಿಶೀಲಿಸುವ ಆಲೋಚನೆ ಇದೆಯೇ? | ದಿನಾಂಕ: 02-01-2026 ರಂದು ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರ ಅಧ್ಯಕ್ಷತೆಯಲ್ಲಿ ನಡೆದ ರಾಜ್ಯ ವನ್ಯಜೀವಿ ಮಂಡಳಿಯ 20ನೇ ಸಭೆಯಲ್ಲಿ ಕೈಗೊಂಡ ನಿರ್ಧಾರದನ್ವಯ ಹಾಗೂ ಸದರಿ ಪರಿಸರ ಪ್ರವಾಸೋದ್ಯಮ ಚಟುವಟಿಕೆಯನ್ನು ಹಂತ-ಹಂತವಾಗಿ ಪುನರಾರಂಭಿಸುವ ಕುರಿತಾಗಿ ರಚಿಸಲಾದ ತಾಂತ್ರಿಕ ಸಮಿತಿಯ ಮಧ್ಯಂತರ ವರದಿಯನ್ವಯ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ) ಕಛೇರಿಯ ದಿನಾಂಕ: 21-02-2026ರ ಅಧಿಕೃತ ಜ್ಞಾಪನಾ ಪತ್ರದಲ್ಲಿ ಸದರಿ ಪರಿಸರ ಪ್ರವಾಸೋದ್ಯಮ ಚಟುವಟಿಕೆಯನ್ನು ಹಂತ-ಹಂತವಾಗಿ ಪುನರಾರಂಭಿಸಲು ಷರತ್ತಿಗೊಳಪಟ್ಟು ಆದೇಶಿಸಲಾಗಿರುತ್ತದೆ. |

**ಇ-ಸಂಖ್ಯೆ: ಅಪಜೀ 78 ಎಫ್‌ಡಬ್ಲ್ಯೂಎಲ್ 2026**

(ಈಶ್ವರ ಬಿ. ಖಂಡ್ರೆ)
ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು